ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

3

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 3/2/2021

### ವಿಧಾನ ಪರಿಷತ್ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ

ವಿ.ಕ 3/2/21

ಸಭಾಪತಿ ಕೆ.ಪ್ರತಾಪ್‌ಚಂದ್ರ ಶೆಟ್ಟಿ ಅವರನ್ನು ಪದಚ್ಯುತಗೊಳಿಸಬೇಕೆಂದು ಪಟ್ಟು ಹಿಡಿದಿರುವ ಬಿಜೆಪಿ ಮಂಗಳವಾರ ಪರಿಷತ್ತಿನಲ್ಲಿ ಅವಿಶ್ವಾಸ ನಿರ್ಣಯ ಮಂಡಿಸಿದೆ. ನಿಯಮದಂತೆ ಬಿಜೆಪಿ ಅವಿಶ್ವಾಸ ನಿರ್ಣಯ ಮಂಡನೆಗೆ ಮುಂಚಿತವಾಗಿಯೇ 14 ದಿನ ನೋಟಿಸ್ ನೀಡಿತ್ತು. ಅದರಂತೆ ನೋಟಿಸ್ ನೀಡಿದ್ದ ಅವಧಿ ಮುಕ್ತಾಯವಾದ ಹಿನ್ನೆಲೆಯಲ್ಲಿ ಮತ್ತೆ ನಿರ್ಣಯ ಮಂಡಿಸಿದೆ. ನಿಯಮ ಪ್ರಕಾರ, ನಿರ್ಣಯ ಮಂಡನೆ ನಂತರ ಐದು ದಿನಗಳಲ್ಲಿ ಅದರ ಚರ್ಚೆಗೆ ಅವಕಾಶ ಮಾಡಿಕೊಡಬೇಕು. ಆದರೆ, ಸೂಕ್ತ ಸಮಯದಲ್ಲಿ ಅವಿಶ್ವಾಸ ನಿರ್ಣಯದ ಪ್ರಸ್ತಾಪ ಚರ್ಚೆಗೆ ಕೈಗೆತ್ತಿಕೊಳ್ಳಲಾಗುವುದು ಎಂದು ಸಭಾಪತಿಗಳು ಹೇಳಿದ್ದಾರೆ. ಹಾಗಾಗಿ, ಯಾವ ದಿನ ಅವಿಶ್ವಾಸ ನಿರ್ಣಯ ಕುರಿತು ಚರ್ಚೆಗೆ ಸಮಯ ನಿಗದಿಪಡಿಸಲಿದ್ದಾರೆ ಎನ್ನುವುದು ಕುತೂಹಲ ಮೂಡಿಸಿದೆ. ಪ್ರಸಕ್ತ ಅಧಿವೇಶನ ಫೆ.5 ರವರೆಗೆ ನಡೆಯಯಲಿದೆ. ಈ ಅವಧಿಯಲ್ಲಿ ಚರ್ಚೆಗೆ ತೆಗೆದುಕೊಳ್ಳಬಹುದು ಇಲ್ಲವೇ ಮುಂದಿನ ಅಧಿವೇಶನದವರೆಗೂ ಮುಂದೂಡಿಕೊಳ್ಳುವ ಅವಕಾಶ ಸಭಾಪತಿಗಳಿಗಿದೆ. ಒಂದು ವೇಳೆ ಈ ಅವಧಿ ಮುನ್ನವೇ ಸಭಾಪತಿ ರಾಜೀನಾಮೆ ಕೂಡ ಸಲ್ಲಿಸಬಹುದಾಗಿದೆ. ಮಧ್ಯಾಹ್ನ ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಸೂಚನೆ ಮೇಲೆ ಬಿಜೆಪಿ ಸದಸ್ಯ ಆಯನೂರು ಮಂಜುನಾಥ್ ನಿರ್ಣಯ ಮಂಡಿಸಿದರು. ಸದನದಲ್ಲಿದ್ದ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಎದ್ದು ನಿಂತು ನಿರ್ಣಯವನ್ನು ಬೆಂಬಲಿಸಿದ ಹಿನ್ನೆಲೆಯಲ್ಲಿ ಸಭಾಪತಿಗಳು ಈ ನಿರ್ಣಯ ಚರ್ಚೆಗೆ ಅಂಗೀಕಾರವಾಗಿದ್ದು, ಚರ್ಚೆಗೆ ಸೂಕ್ತ ಸಮಯ ನಿಗದಿಪಡಿಸಲಾಗುವುದು ಎಂದು ಭರವಸೆ ನೀಡಿದರು.